# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 186 |
| ಸದಸ್ಯರ ಹೆಸರು | | ಶ್ರೀ ಚಿದಾನಂದ್ ಎಂ. ಗೌಡ ( ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 13.09.2021 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| (ಅ) | ಕರ್ನಾಟಕ ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ ಎಷ್ಟು; ಮತ್ತು ಈ ಉಪನ್ಯಾಸಕರುಗಳಿಗೆ ನೀಡುವ ಮಾಸಿಕ ವೇತನವೆಷ್ಟು; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2020-21ನೇ ಸಾಲಿನಲ್ಲಿ ಒಟ್ಟು-14183 ಅತಿಥಿ ಉಪನ್ಯಾಸಕರುಗಳು ಕಾರ್ಯನಿರ್ವಹಿಸಿರುತ್ತಾರೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ/66/ಡಿಸಿಇ/2017, ದಿನಾಂಕ:04.04.2017ರನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳನ್ನು ಪಡೆದಿದ್ದು, ಎನ್‌ಇಟಿ/ ಎಸ್‌ಎಲ್‌ಇಟಿ ಅಥವಾ ಪಿ.ಹೆಚ್‌ಡಿ ಪಡೆದುಕೊಂಡಿರುವ ಅತಿಥಿ ಉಪನ್ಯಾಸಕರಿಗೆ ರೂ.13,000/- ಹಾಗೂ ಸ್ನಾತಕೋತ್ತರ/ಎಂ.ಫಿಲ್ ಪದವೀಧರ ಅತಿಥಿ ಉಪನ್ಯಾಸಕರಿಗೆ ರೂ.11,000/-ಗಳನ್ನು ಪಾವತಿಸಲಾಗುತ್ತಿದೆ. |
| (ಆ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಮಾಹಿತಿ ನೀಡುವುದು? | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಇಡಿ 154 ಡಿಸಿಇ 2021

(ಡಾ.ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ ಸಚಿವರು